**Akashvani : Bangalore**
**Regional Bulletin In Kannada**
**14.07.2025 / 2.30 pm**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಸಿಗಂದೂರು ಸೇತುವೆ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ನಿತಿನ್ ಗಡ್ಕರಿ
- ಶಕ್ತಿ ಯೋಜನೆ: ೫೦೦ನೇ ಕೋಟಿಯ ಟಿಕೆಟ್ ವಿತರಿಸಿದ ಮುಖ್ಯಮಂತ್ರಿ
- ಪ್ರಧಾನಮಂತ್ರಿ ಇ-ಬಸ್ ಸೇವಾ ಯೋಜನೆಯಡಿ ರಾಜ್ಯದ ೧೦ ನಗರಗಳಿಗೆ ತಲಾ ೧೦೦ ಎಲೆಕ್ಟ್ರಿಕಲ್ ಬಸ್ ಮಂಜೂರು
- ಹಿರಿಯ ನಟಿ ಬಿ.ಸರೋಜಾ ದೇವಿ ನಿಧನ: ಗಣ್ಯರ ಸಂತಾಪ

**><><><><><><><><><><><**

ಶಿವಮೊಗ್ಗದ ಬಹುನಿರೀಕ್ಷಿತ ಅಂಬಾರಗೋಡ್ಲು-ಕಳಸವಳ್ಳಿಯ ಸಿಗಂದೂರು ಸೇತುವೆಯನ್ನು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಇಂದು ಲೋಕಾರ್ಪಣೆಗೊಳಿಸಿದರು. ಸುಮಾರು ೪೭೩ ಕೋಟಿ ರೂಪಾಯಿಗಳ ವೆಚ್ಚದಲ್ಲಿ ೨.೪೪ ಕಿ.ಮೀ. ಉದ್ದದ ಸೇತುವೆಯು ದೇಶದ ಎರಡನೇ ಅತೀ ಉದ್ದದ ಕೇಬಲ್ ಆಧಾರಿತ ಸೇತುವೆಯಾಗಿದೆ. ಈ ವೇಳೆ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಹಿರಿಯ ನಾಯಕ ಕಾಗೋಡು ತಿಮ್ಮಪ್ಪ, ಶಿವಮೊಗ್ಗ ನಗರ ಶಾಸಕ ಎಸ್.ಎನ್.ಚನ್ನಬಸಪ್ಪ, ಪರಿಷತ್ ಸದಸ್ಯರಾದ ಡಿ.ಎಸ್.ಅರುಣ್ ಹಾಗೂ ಡಾ. ಧನಂಜಯ ಸರ್ಜಿ ಉಪಸ್ಥಿತರಿದ್ದರು.

**><><><><><><><><><><><**

ಸರ್ಕಾರದ ಮಹತ್ವಾಕಾಂಕ್ಷಿ 'ಶಕ್ತಿ ಯೋಜನೆ'ಯಡಿ ೫೦೦ನೇ ಕೋಟಿಯ ಮಹಿಳಾ ಪ್ರಯಾಣಿಕರ ಪ್ರಯಾಣ ಸಂಭ್ರಮದ ಅಂಗವಾಗಿ ಸಾಂಕೇತಿಕವಾಗಿ ೫೦೦ನೇ ಕೋಟಿಯ ಟಿಕೆಟ್ ಅನ್ನು ಇಂದು ವಿತರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೨೩ರ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಐದು ಗ್ಯಾರಂಟಿ ಯೋಜನೆಗಳನ್ನು ಘೋಷಿಸಲಾಗಿತ್ತು. ೨೦೨೩ರ ಮೇ ೨೦ ರಂದು ಸರ್ಕಾರ ಅಸ್ತಿತ್ವಕ್ಕೆ ಬಂದ ತಕ್ಷಣ ಜಾರಿಗೊಳಿಸಲು ಸಚಿವ ಸಂಪುಟದಲ್ಲಿ ಕೈಗೊಂಡ ತೀರ್ಮಾನದಂತೆ ಜೂನ್ ೧೧ ರಂದು ಶಕ್ತಿ ಯೋಜನೆಗೆ ಚಾಲನೆ ನೀಡಲಾಯಿತು. ಅಂದಿನಿಂದ ರಾಜ್ಯದ ಮಹಿಳೆಯರಿಗೆ ಸರ್ಕಾರಿ ಬಸ್ಸುಗಳಲ್ಲಿ ಉಚಿತ ಪ್ರಯಾಣದ ಸೌಲಭ್ಯವನ್ನು ಕಲ್ಪಿಸಲಾಗಿರುವುದಾಗಿ ಅವರು ಹೇಳಿದ್ದಾರೆ.

**><><><><><><><><><><><**

ರಾಜ್ಯದ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿಯ ಪಂಚ ಗ್ಯಾರಂಟಿಗಳಲ್ಲೊಂದಾದ ಶಕ್ತಿ ಯೋಜನೆಯು ಜಾರಿಗೊಂಡು ೨ ವರ್ಷ ತಲುಪಿದೆ. ಈವರೆಗಿನ ಶಕ್ತಿ ಯೋಜನೆಯ ಒಟ್ಟು ಪ್ರಯಾಣಿಸಿದ ಫಲಾನುಭವಿಗಳ ಸಂಖ್ಯೆ ೫೦೦ ಕೋಟಿ ದಾಟಿರುವ ಹಿನ್ನೆಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಗ್ಯಾರೆಂಟಿ ಯೋಜನೆಯ

ಅನುಷ್ಠಾನ ಸಮಿತಿ ನೇತೃತ್ವದಲ್ಲಿ ಜಿಲ್ಲೆಯ ಬಸ್ ನಿಲ್ದಾಣಗಳಲ್ಲಿ ಬಸ್‌ಗಳಿಗೆ ಪೂಜೆ ಸಲ್ಲಿಸಿ, ಪ್ರಯಾಣಿಕರಿಗೆ ಸಿಹಿ ಹಂಚಿ, ಸಂಭ್ರಮಿಸಲಾಯಿತು. ಶಕ್ತಿ ಯೋಜನೆಯ ಜಾರಿಯಿಂದಾಗಿ ಮಹಿಳೆಯರ ಆರ್ಥಿಕ ಶಕ್ತಿ ಸದೃಢ ವಾಗುತ್ತಿದ್ದು, ಸರ್ಕಾರ ಐದು ಗ್ಯಾರೆಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿದೆ ಎಂದು ಮಾಜಿ ಶಾಸಕ ಟಿ.ವೆಂಕಟರಮಣಯ್ಯ ಹೇಳಿದ್ದಾರೆ. ಇನ್ನೊಂದೆಡೆ, ಹುಬ್ಬಳ್ಳಿಯ ಹೊಸೂರು ಪ್ರಾದೇಶಿಕ ಬಸ್ ನಿಲ್ದಾಣದಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ನೇತೃತ್ವದಲ್ಲಿ ಸಿಹಿ ಹಂಚಿ ಸಂಭ್ರಮಿಸಲಾಯಿತು. ಈ ವೇಳೆ ಮಾತನಾಡಿದ ಅವರು, ನೆರೆಯ ಮಹಾರಾಷ್ಟ್ರ ಹಾಗೂ ತಮಿಳುನಾಡಿನಲ್ಲಿ ಹೆಚ್ಚು ಜನಸಂಖ್ಯೆ ಇದ್ದರೂ ಬಸ್‌ಗಳ ಸಂಖ್ಯೆ ಕಡಿಮೆ ಇವೆ. ಆದರೆ ಕರ್ನಾಟಕದಲ್ಲಿ ಆ ರಾಜ್ಯಗಳಿಂತ ಜನಸಂಖ್ಯೆ ಕಡಿಮೆ ಇದ್ದರೂ ಹೆಚ್ಚು ಬಸ್‌ಗಳನ್ನು ಹೊಂದಿದೆ ಎಂದು ಹೇಳಿದರು. ಶಕ್ತಿ ಯೋಜನೆ ಮುನ್ನ ರಾಜ್ಯದಲ್ಲಿ ನಿತ್ಯ ಸುಮಾರು ೬೫ ರಿಂದ ೭೦ ಲಕ್ಷ ಜನರು ಪ್ರಯಾಣ ಮಾಡುತ್ತಿದ್ದರು. ಶಕ್ತಿ ಯೋಜನೆ ಜಾರಿ ಬಳಿಕ ೧ ಕೋಟಿ ೧೮ ಲಕ್ಷ ಜನರು ಪ್ರಯಾಣ ಮಾಡುತ್ತಿದ್ದಾರೆ ಎಂದರು.

><><><><><><><><><><><

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಪ್ರಧಾನಮಂತ್ರಿ ಇ-ಬಸ್ ಸೇವಾ ಯೋಜನೆಯಡಿ ಮಂಗಳೂರಿಗೆ ಒಟ್ಟು ೧೦೦ ಹೊಸ ಇಲೆಕ್ಟ್ರಿಕ್ ಬಸ್‌ಗಳನ್ನು ಮಂಜೂರು ಮಾಡಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ದೇಶದಲ್ಲಿ ವಾಹನಗಳಿಂದಾಗುವ ವಾಯುಮಾಲಿನ್ಯ ತಡೆಗಟ್ಟುವುದಕ್ಕೆ ಕೇಂದ್ರ ಸರ್ಕಾರ ದೇಶದೆಲ್ಲೆಡೆ ಎಲೆಕ್ಟ್ರಿಕ್ ಬಸ್‌ಗಳ ಬಳಕೆಯನ್ನು ಹೆಚ್ಚು ಜನಪ್ರಿಯಗೊಳಿಸುತ್ತಿದೆ. ಅದರಂತೆ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದಿಂದ ರಾಜ್ಯಕ್ಕೆ ಒಟ್ಟು ೭೫೦ ಎಲೆಕ್ಟ್ರಿಕಲ್ ಬಸ್‌ಗಳು ಮಂಜೂರಾಗಿದ್ದು, ಆ ಪೈಕಿ ಮಂಗಳೂರು ನಗರಕ್ಕೆ ೧೦೦ ಬಸ್‌ಗಳನ್ನು ಮಂಜೂರು ಮಾಡಲಾಗಿದೆ ಎಂದರು. ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಕಲಬುರ್ಗಿ, ಮೈಸೂರು, ಶಿವಮೊಗ್ಗ ಸೇರಿದಂತೆ ಒಟ್ಟು ೧೦ ನಗರಗಳಿಗೆ ತಲಾ ೧೦೦ ಎಲೆಕ್ಟ್ರಿಕಲ್ ಬಸ್‌ಗಳನ್ನು ಮಂಜೂರು ಮಾಡಲಾಗಿದೆ. ಪರಿಸರ ಸ್ನೇಹಿಯಾದ ಈ ಬಸ್‌ಗಳು ಶೀಘ್ರದಲ್ಲೇ ಮಂಗಳೂರು ನಗರದ ವಿವಿಧ ಮಾರ್ಗಗಳಲ್ಲಿ ರಸ್ತೆಗಿಳಿಯಲಿದೆ ಎಂದು ಸಂಸದ ಬ್ರಿಜೇಶ್ ಚೌಟ ಹೇಳಿದ್ದಾರೆ.

><><><><><><><><><><><

ಬೆಂಗಳೂರಿನ ಹೆಬ್ಬಾಳದಿಂದ ಸಿಲ್ಕ್ ಬೋರ್ಡ್ ವರೆಗಿನ ಸುರಂಗ ರಸ್ತೆಯು ಸಂಪೂರ್ಣ ಅವೈಜ್ಞಾನಿಕ ಎಂದು ಸಂಸದ ತೇಜಸ್ವಿ ಸೂರ್ಯ ಟೀಕಿಸಿದ್ದಾರೆ. ಈ ಯೋಜನೆಯು ಬೆಂಗಳೂರು ನಗರ ಸಂಚಾರ ವ್ಯವಸ್ಥೆಯನ್ನು ವ್ಯವಸ್ಥಿತವಾಗಿ ವಿನಾಶಗೊಳಿಸುವ ಕಾಂಗ್ರೆಸ್ ಸರ್ಕಾರದ ಹುನ್ನಾರವಾಗಿದೆ ಎಂದು ಅವರು ಆರೋಪಿಸಿದ್ದಾರೆ. ಬೆಂಗಳೂರಿನ ಹೆಬ್ಬಾಳದಿಂದ ಸಿಲ್ಕ್ ಬೋರ್ಡ್‌ವರೆಗಿನ ಉತ್ತರ-ದಕ್ಷಿಣ ಕಾರಿಡಾರ್‌ಗಾಗಿ ೧೮ ಸಾವಿರದ ೫೦೦ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲಾಗುತ್ತಿದೆ. ಆದರೆ ಇದು ಕೇವಲ ೪ ಚಕ್ರದ ವಾಹನಗಳಿಗೆ ಮಾತ್ರ ಮೀಸಲಾಗಿದೆ. ಈ ಮಾರ್ಗವು ನಮ್ಮ ಮೆಟ್ರೋ ಮತ್ತು ಉಪನಗರ ರೈಲು ಮಾರ್ಗಗಳನ್ನು ಅತಿಕ್ರಮಿಸುತ್ತದೆ ಎಂದರು. ಈ ರಸ್ತೆಯಲ್ಲಿ ಸಂಚರಿಸಲು ಟೋಲ್ ಶುಲ್ಕ ಪಾವತಿಸುವುದು ಕಡ್ಡಾಯವಾಗಿದೆ. ಅತೀ ಹೆಚ್ಚು ಟೋಲ್ ಸಂಗ್ರಹಿಸಿರುವುದರಿಂದ ಇದು ಕೇವಲ ಶ್ರೀಮಂತರಿಗಷ್ಟೇ ಸೀಮಿತವಾಗಿದೆ ಎಂದು ಸಂಸದ ತೇಜಸ್ವಿ ಸೂರ್ಯ ದೂರಿದ್ದಾರೆ.

><><><><><><><><><><><

ಹಿರಿಯ ನಟಿ ಬಿ.ಸರೋಜಾದೇವಿ ಇಂದು ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ. ಅವರಿಗೆ ೮೭ ವರ್ಷ ವಯಸ್ಸಾಗಿತ್ತು. ೫ ದಶಕಗಳ ಕಾಲ ಚಿತ್ರರಂಗದಲ್ಲಿ ಸೇವೆ ಸಲ್ಲಿಸಿದ್ದ ಇವರು, ಅಭಿನಯ ಸರಸ್ವತಿ ಎಂದು ಖ್ಯಾತರಾಗಿದ್ದರು. ಕನ್ನಡ ಮಾತ್ರವಲ್ಲದೇ ತಮಿಳು, ತೆಲುಗು ಸಿನಿಮಾ ರಂಗಕ್ಕೂ ಅವರು ಅಮೂಲ್ಯ ಕೊಡುಗೆ ನೀಡಿದ್ದು, ೨೦೦ಕ್ಕೂ ಅಧಿಕ ಚಲನಚಿತ್ರಗಳಲ್ಲಿ ನಟಿಸಿ, ಜನಮನ ಗೆದ್ದಿದ್ದರು. ಮೇರು ನಟರಾದಂತಹ ಡಾ. ರಾಜಕುಮಾರ್, ಕಲ್ಯಾಣಕುಮಾರ್ ಸೇರಿದಂತೆ ಅನೇಕರೊಂದಿಗೆ ನಟಿಸಿದ್ದ ಅವರು, ಅಮರಶಿಲ್ಪಿ ಜಕಣಾಚಾರಿ, ಭಾಗ್ಯವಂತರು, ಬಬ್ರೂವಾಹನ ಮತ್ತು ಕಥಾಸಂಗಮ ಚಲನಚಿತ್ರಗಳಲ್ಲಿ ಅಭಿನಯಿಸಿ ಮೆಚ್ಚುಗೆಗೆ ಪಾತ್ರರಾಗಿದ್ದರು. ಭಾರತೀಯ ಚಿತ್ರರಂಗಕ್ಕೆ ಅವರು ನೀಡಿದಂತ ಅಮೂಲ್ಯ ಕೊಡುಗೆಗಳಿಗಾಗಿ ಅವರಿಗೆ ಭಾರತ ಸರ್ಕಾರ ಪದ್ಮಭೂಷಣ ಹಾಗೂ ಪದ್ಮಶ್ರೀ ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ. ೫೦ನೇ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಸನ್ಮಾನಿಸಲಾಗಿದೆ. ಕರ್ನಾಟಕ ಸರ್ಕಾರ ಡಾ. ರಾಜಕುಮಾರ್ ಜೀವಮಾನ ಸಾಧನೆ ಪ್ರಶಸ್ತಿ, ತಮಿಳುನಾಡು ಸರ್ಕಾರ ಕಲೈಮಾಮಣಿ ಜೀವಮಾನ ಸಾಧನೆ ಪ್ರಶಸ್ತಿ ಹಾಗೂ ಆಂಧ್ರಪ್ರದೇಶ ಸರ್ಕಾರ ಎನ್‌ಟಿಆರ್ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಿದೆ. ನಟಿ ಬಿ.ಸರೋಜಾದೇವಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಂಸದ ಬಸವರಾಜ ಬೊಮ್ಮಾಯಿ, ನಟ ಶಿವರಾಜ್ ಕುಮಾರ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ನಾಳೆ ಅವರ ಅಂತ್ಯಕ್ರಿಯೆ ನಡೆಯಲಿದೆ.

><><><><><><><><><><><

ಜೆ.ಡಿ.ಎಸ್ ರಾಜ್ಯ ಉಪಾಧ್ಯಕ್ಷ, ಹಿರಿಯ ರಾಜಕಾರಣಿ ಹೆಚ್.ಟಿ.ರಾಜೇಂದ್ರ ಅವರು ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್.ಪುರ ತಾಲೂಕಿನ ಮಡಬೂರು ಗ್ರಾಮದ ನಿವಾಸದಲ್ಲಿಂದು ನಿಧನರಾಗಿದ್ದಾರೆ. ಅವರಿಗೆ ೭೨ ವರ್ಷ ವಯಸ್ಸಾಗಿತ್ತು. ಮೃತರ ನಿಧನಕ್ಕೆ ಕೇಂದ್ರ ಸಚಿವ ಹೆಚ್.ಡಿ.ಕುಮಾರ ಸ್ವಾಮಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

><><><><><><><><><><><

ಯಾದಗಿರಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಒಟ್ಟು ೧೨ ಪೀಠಗಳಲ್ಲಿ ಜುಲೈ ೧೨ರಂದು ಜರುಗಿದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ೩೮ ಸಾವಿರದ ೪೧೭ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮರುಳಸಿದ್ಧಾರಾಧ್ಯ ಎಚ್.ಜೆ. ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ೭ ಸಾವಿರದ ೪೦೦ ಹಾಗೂ ವ್ಯಾಜ್ಯಪೂರ್ವ ೨೩ ಸಾವಿರದ ೯೫೫ ಸೇರಿ ಒಟ್ಟು ೩೮ ಸಾವಿರದ ೪೧೭ ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥಗೊಂಡಿವೆ ಎಂದು ಅವರು ಮಾಹಿತಿ ನೀಡಿದ್ದಾರೆ.

><><><><><><><><><><><

ಕೆರೆಗಳ ಅತಿಕ್ರಮಣ ಮತ್ತು ಉಳುಮೆ ಪ್ರಕರಣಗಳನ್ನು ತಹಸೀಲ್ದಾರರು ಮತ್ತು ಉಪ ವಿಭಾಗಾಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ

ಸೂಚಿಸಿದ್ದಾರೆ. ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿ ಇಂದು ನಡೆದ ನೆಲ, ಜಲ ಸಂರಕ್ಷಣೆ ಕುರಿತು ಪರಿಸರವಾದಿಗಳು ಹಾಗೂ ರೈತ ಮುಖಂಡರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

><><><><><><><><><><><

ಇಂದಿನಿಂದ ಮೂರು ದಿನಗಳ ಕಾಲ ಉತ್ತರ ಕನ್ನಡ ಜಿಲ್ಲೆಯ ಕರಾವಳಿ ತಾಲೂಕುಗಳಲ್ಲಿ ಅತೀ ವೇಗವಾಗಿ ಬಿರುಗಾಳಿ ಬೀಸುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದ್ದು, ಸಾರ್ವಜನಿಕರು, ಮೀನುಗಾರರು ಹಾಗೂ ಪ್ರವಾಸಿಗರು ಎಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ.

><><><><><><><><><><><

ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ಕ್ಕೆ

><><><><><><><><><><><